# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 447 ( 499) |
| ಸದಸ್ಯರ ಹೆಸರು | ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 21.02.2022 |
| ಉತ್ತರಿಸಬೇಕಾದ ಸಚಿವರು | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಪ್ರಶ್ನೆ | ಉತ್ತರ |
|---|---|
| ಅ) ರಾಜ್ಯದಲ್ಲಿ ಯಾವ ಸಾಲಿನವರೆಗಿನ ಖಾಸಗಿ ಕನ್ನಡ ಮಾಧ್ಯಮದ ಶಾಲಾ – ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ; | 01.06.1987 ರಿಂದ 1994-95ನೇ ಅವಧಿಯಲ್ಲಿ, ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸಿ ವಿಚ್ಛಿನ್ನತೆ ಇಲ್ಲದೇ ಸತತವಾಗಿ ನಡೆದು ಕೊಂಡು ಬಂದ ಶಾಲೆಗಳನ್ನು ವೇತನಾನುದಾನಕ್ಕೊಳಪಡಿಸಲು ಕ್ರಮವಹಿಸಲಾಗಿದೆ. |
| ಆ) 1995ರ ನಂತರ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ:<br>ಇ) ಹಾಗಿದ್ದಲ್ಲಿ, ಯಾವ ಸಾಲಿನವರೆಗಿನ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುವುದು? (ವಿವರ ನೀಡುವುದು) | 1995ರ ನಂತರ ಆರಂಭವಾದ ಅನುದಾನ ರಹಿತ ಕನ್ನಡ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ, ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ 1995 ರಿಂದ 2019 ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳಲ್ಲಿ |

| | |
|---|---|
| | ಎಷ್ಟು ಶಿಕ್ಷಕರು / ಉಪನ್ಯಾಸಕರುಗಳು / ಬೋಧಕೇತರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಮಾಹಿತಿಯನ್ನು, ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುತ್ತಿದೆ. |

ಇಡಿ 48 ಪಿಎಂಸಿ 2022

( ಬಿ.ಸಿ.ನಾಗೇಶ್ )

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.